**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 18/2025**

**ಚಾ.ಸಾ. :-1**
**ಪ್ರಾ.ಸಾ. :-1**

ಹೆಸರು : ಪುಟ್ಟೇಗೌಡ

ತಂದೆಯ ಹೆಸರು : ಲೇಟ್ ಚನ್ನೇಗೌಡ

ವಯಸ್ಸು : 39 ವರ್ಷ

ಉದ್ಯೋಗ : ಖಾಸಗಿ ಕೆಲಸ

ವಾಸಸ್ಥಳ : ಪಾಲಹಳ್ಳಿ ಗ್ರಾಮ

---

**ಪ್ರಮಾಣೀಕರಿಸಲಾದ ದಿನಾಂಕಃ- 21.04.2026**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ಚನ್ನೇಗೌಡ ನನ್ನ ತಂದೆ. ಅವರಿಗೆ ದಿನಾಂಕಃ 01.04.2025 ರಂದು ಮಧ್ಯಾಹ್ನ 2.30 ರ ಸಮಯದಲ್ಲಿ ಬೊಮ್ಮೂರುಅಗ್ರಹಾರದ ಬಳಿ ಅಪಘಾತವಾಗಿರುತ್ತದೆ. ಆ ಸಮಯದಲ್ಲಿ ಅವರು ನಡೆದುಕೊಂಡು ಹೋಗುತ್ತಿದ್ದು, ಅವರಿಗೆ ಕಾರು ಡಿಕ್ಕಿಪಡಿಸಿ ಅಪಘಾತವಾಗಿರುತ್ತದೆ.

ನನಗೆ ಅಪಘಾತದ ಬಗ್ಗೆ ನನ್ನ ಸಂಬಂಧಿಕರು ನನಗೆ ದೂರವಾಣಿ ಕರೆ ಮಾಡಿ ತಿಳಿಸಿರುತ್ತಾರೆ. ನಂತರ ನಾನು ಆಸ್ಪತ್ರೆಗೆ ಹೋಗಿ ಅವರನ್ನು ನೋಡಿರುತ್ತೇನೆ. ಅವರಿಗೆ ತಲೆಯ ಭಾಗ, ಬೆನ್ನು, ಕೈ-ಕಾಲುಗಳಿಗೆ ತೀವ್ರವಾದ ಗಾಯಗಳಾಗಿತ್ತು.

ನಂತರ ಚಿಕಿತ್ಸೆ ಫಲಕಾರಿಯಾಗದೇ ಸದರಿಯವರು ಸುಮಾರು 3 ದಿನಗಳ ನಂತರ ಮೃತಪಟ್ಟಿರುತ್ತಾರೆ. ಆ ಬಗ್ಗೆ ನಾನು ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

**ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, *ಸಮಯಾವಾಕಾಶ ನೀಡಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**